ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 122 |
| ಸದಸ್ಯರ ಹೆಸರು | : | ಶ್ರೀ ಬಿ.ಎಂ. ಫಾರೂಖ್ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 13.02.2023 |
| ಉತ್ತರಿಸುವ ಸಚಿವರು | : | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು |

| ಕ್ರಮ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| ಅ) | ದಕ್ಷಿಣ ಕನ್ನಡ ಜಿಲ್ಲೆ ಮಂಗಳೂರಿನ ಸುರತ್ಕಲ್-ಕೃಷ್ಣಾಪುರ-ಕಾವ್ರೂರು ಪ್ರದೇಶದಲ್ಲಿ ಸುಸಜ್ಜಿತ ಸರ್ಕಾರಿ ಆಸ್ಪತ್ರೆಯ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದಿಯೇ: | ದಕ್ಷಿಣ ಕನ್ನಡ ಜಿಲ್ಲೆಯ ಮಂಗಳೂರು ತಾಲ್ಲೂಕಿನ ಸುರತ್ಕಲ್ ಪ್ರದೇಶದಲ್ಲಿ ಸುರತ್ಕಲ್ ನಗರ ಪ್ರಾಥಮಿಕ ಆರೋಗ್ಯ ಕೇಂದ್ರ ಕಾರ್ಯನಿರ್ವಹಿಸುತ್ತಿದ್ದು, ಕೃಷ್ಣಾಪುರ ಪ್ರದೇಶದಲ್ಲಿ ಕಾಟಿಪಳ್ಳ ಪ್ರಾಥಮಿಕ ಆರೋಗ್ಯ ಕೇಂದ್ರ ಕಾರ್ಯನಿರ್ವಹಿಸುತ್ತಿದೆ ಹಾಗೂ ಕಾವೂರು ಪ್ರದೇಶದ ಹತ್ತಿರದಲ್ಲಿ ಬೋಂದೆಲ್ ನಗರ ಪ್ರಾಥಮಿಕ ಆರೋಗ್ಯ ಕೇಂದ್ರಗಳು ಕಾರ್ಯ ನಿರ್ವಹಿಸುತ್ತಿವೆ. |
| ಆ) | ತುರ್ತು ಚಿಕಿತ್ಸೆ, ಆರೋಗ್ಯ ಸಮಸ್ಯೆ ಚಿಕಿತ್ಸೆಗೆ ಸಾರ್ವಜನಿಕರು ದೂರದೂರದ ಸ್ಥಳಗಳಿಗೆ ಪ್ರಯಾಣಿಸಬೇಕಾದ ಶೋಚನೀಯ ಪರಿಸ್ಥಿತಿಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | |
| ಇ) | ಹಾಗಿದ್ದಾಗ್ಯೂ ಈವರೆಗೆ ಒಂದು ಸುಸಜ್ಜಿತ ಸರ್ಕಾರಿ ಆಸ್ಪತ್ರೆ ಒದಗಿಸದಿರಲು ಕಾರಣಗಳೇನು: ಯೋಜನೆ ನೀಡಿಕೆ ಆಗಿದ್ದಲ್ಲಿ ಕಾರ್ಯರೂಪಕ್ಕೆ ಬರದಿರುವುದಕ್ಕೆ ಕಾರಣಗಳೇನು: (ವಿವರ ನೀಡುವುದು) | 2021ರ ಯೋಜಿತ ಜನಗಣತಿಯ ಪ್ರಕಾರ ಮಂಗಳೂರು ತಾಲ್ಲೂಕಿನ ಗ್ರಾಮೀಣ ಜನಸಂಖ್ಯೆ:-1,95,840 ಇದ್ದು, ಜನಸಂಖ್ಯೆಗೆ ಅನುಗುಣವಾಗಿ 2 ಸಮುದಾಯ ಆರೋಗ್ಯ ಕೇಂದ್ರ ತೆರೆಯಲು ನಿಯಮಗಳಲ್ಲಿ ಅವಕಾಶವಿರುತ್ತದೆ. ಹಾಲಿ 2 ಸಮುದಾಯ ಆರೋಗ್ಯ ಕೇಂದ್ರ ಕಾರ್ಯನಿರ್ವಹಿಸುತ್ತಿವೆ. ಜನಸಂಖ್ಯೆಗನುಗುಣವಾಗಿ ಸಮುದಾಯ ಆರೋಗ್ಯ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ. |
| ಈ) | ದಕ್ಷಿಣ ಕನ್ನಡ ಜಿಲ್ಲೆ ಉತ್ತರ -ದಕ್ಷಿಣ ತಾಲ್ಲೂಕುಗಳ ಸಂಪೂರ್ಣ ಆರೋಗ್ಯ ಕೇಂದ್ರ PHC, CHC ಸಾರ್ವಜನಿಕ ಆರೋಗ್ಯ ಕಾಳಜಿ ಕೇಂದ್ರಗಳ ಇರುವ ವ್ಯವಸ್ಥೆಗಳ ಈಗಿನ ಸ್ಥಿತಿಗತಿಗಳೇನು? (ವಾರ್ಷಿಕ ನಿರ್ವಹಣ ವೆಚ್ಚದ ಮಾಹಿತಿ ನೀಡುವುದು) | ಮಂಗಳೂರು ನಗರ ದಕ್ಷಿಣ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ನಗರ ಪ್ರಾಥಮಿಕ ಆರೋಗ್ಯ ಕೇಂದ್ರಗಳ ವಿವರಗಳು ಈ ಕೆಳಗಿನಂತಿವೆ.<br>1. ಜೆಪ್ಪು,<br>2. ಶಕ್ತಿನಗರ,<br>3. ಕೂಳೂರು,<br>4. ಪಡೀಲ್,<br>5. ಎಕ್ಕೂರು,<br>6. ಲೇಡಿಹಿಲ್,<br>7. ಕಸಬಬೆಂಗ್ರೆ. |

| | | |
|---|---|---|
| | | ಮಂಗಳೂರು ನಗರ ಉತ್ತರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ನಗರ ಪ್ರಾಥಮಿಕ ಆರೋಗ್ಯ ಕೇಂದ್ರಗಳು ಈ ಕೆಳಗಿನಂತಿವೆ.<br>1. ಸುರತ್ಕಲ್,<br>2. ಕುಳಾಯಿ,<br>3. ಕುಂಜತ್ ಬೈಲು ಹಾಗೂ<br><br>ಪ್ರಾಥಮಿಕ ಆರೋಗ್ಯ ಕೇಂದ್ರ<br><br>1. ಕಾಟಿಪಳ್ಳ,<br>2. ಆಡ್ಯಾರ್,<br>3. ಕುಡುಪು,<br>4. ಗಂಜಿಮಠ,<br>5. ಕುಪ್ಪೆಪದವು,<br>6. ಕೊಂಪದವು.<br><br>ಪ್ರತಿ ಪ್ರಾಥಮಿಕ ಆರೋಗ್ಯ ಕೇಂದ್ರಗಳ ವಾರ್ಷಿಕ ನಿರ್ವಹಣಾ ವೆಚ್ಚ ರೂ. 1,75,000.00/- |

ಆಕುಕ 02 ಎಸ್‌ಬಿ ವಿ 2023

(ಡಾ|| ಕೆ. ಸುಧಾಕರ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ
ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು